ಸಾಕ್ಷಿಯನ್ನು ಕರೆಯಿಸಿ ಪ್ರಮಾಣೀಕರಿಸಲಾಯಿತು. ದಿನಾಂಕ: 05.03.2024.

**ಮುಖ್ಯ ವಿಚಾರಣೆ: ವಾದಿಯ ಪರ ವಕೀಲರಿಂದ:**

ನನ್ನ ಮುಖ್ಯ ವಿಚಾರಣೆಯ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದಾ ಕೂಡಿದ್ದು, ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಸಹಿ ಮಾಡಿರುತ್ತೇನೆ.

ಇಂದು ನಾನು ದಾವೆಗೆ ಸಂಬಂಧಪಟ್ಟಂತೆ ಕೆಲವು ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ, ಅವುಗಳನ್ನು ನನ್ನ ಪರವಾಗಿ ಪರಿಗಣಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.

ಮೂರು ಆರ್‌ಟಿಸಿಗಳನ್ನು ಕ್ರಮವಾಗಿ ನಿಪಿ-1 ರಿಂದ ನಿಪಿ-3 ಎಂದು, ನನ್ನ ಹಾಗೂ 2 ಮತ್ತು 3 ನೇ ವಾದಿಯರ ಮೂಲ ಆಧಾರ ಗುರುತಿನ ಚೀಟಿಗಳನ್ನು ಕ್ರಮವಾಗಿ ನಿಪಿ-4 ರಿಂದ ನಿಪಿ-6 ಎಂದು ಗುರುತಿಸಲಾಯಿತು.

ಆದ್ದರಿಂದ ನಾನು ನನ್ನ ದಾವೆಯಲ್ಲಿ ಕೇಳಿದಂತೆ ಡಿಕ್ರಿ ಮಾಡಬೇಕೆಂದು ಮಾನ್ಯ ನ್ಯಾಯಾಲಯಕ್ಕೆ ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು: ಪ್ರತಿವಾದಿ ಪರ ವಕೀಲರಿಂದ:**

(ಪ್ರತಿವಾದಿಯರು ಪ್ರತಿವಾದ ಪತ್ರ ಸಲ್ಲಿಸದೇ ಇರುವ ಕಾರಣ, ಪಾಟೀ ಸವಾಲು ಏನು ಇಲ್ಲಾ ಎಂದು ತೆಗೆದುಕೊಳ್ಳಲಾಯಿತು.)

**ಮರು ವಿಚಾರಣೆ: ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

**ಹಿರಿಯ ಸಿವಿಲ್ ನ್ಯಾಯಾಧೀಶರು,**
**ಆಳಂದ.**